**All India Radio: Bangalore**
**National Bulletin In Kannada**
**08.12.2025  07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ರಾಷ್ಟ್ರೀಯ ಗೀತೆ ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವದ ಕುರಿತು ಇಂದು ಲೋಕಸಭೆಯಲ್ಲಿ ವಿಶೇಷ ಚರ್ಚೆ
2. ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಗಾಗಿ ಅಂತರಸರ್ಕಾರಿ ಸಮಿತಿಯ ೨೦ನೇ ಅಧಿವೇಶನ ; ಇಂದು ನವದೆಹಲಿಯ ಕೆಂಪು ಕೋಟೆಯಲ್ಲಿ ಪ್ರಾರಂಭ
3. ಕರ್ನಾಟಕ ವಿಧಾನಮಂಡಲದ ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ಇಂದಿನಿಂದ ಆರಂಭ ; ಉತ್ತರ ಕರ್ನಾಟಕ ಸಮಸ್ಯೆಗಳಿಗೆ ಒತ್ತು ನಿರೀಕ್ಷೆ
4. ಮೂರು ಪಂದ್ಯಗಳ ಪುರುಷರ ಹಾಕಿ ಸರಣಿ : ದಕ್ಷಿಣ ಆಫ್ರಿಕಾ ವಿರುದ್ಧ ಮೊದಲ ಪಂದ್ಯದಲ್ಲಿ ಭಾರತಕ್ಕೆ ಗೆಲುವು

<><><>

ರಾಷ್ಟ್ರೀಯ ಗೀತೆ ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವದ ಕುರಿತು ಇಂದು ಲೋಕಸಭೆಯಲ್ಲಿ ವಿಶೇಷ ಚರ್ಚೆ ಆರಂಭವಾಗಲಿದೆ. ಅಧಿಕೃತ ಮೂಲಗಳ ಪ್ರಕಾರ, ಪ್ರಧಾನಿ ನರೇಂದ್ರ ಮೋದಿ ಅವರು ಲೋಕಸಭೆಯಲ್ಲಿ ಚರ್ಚೆಯನ್ನು ಪ್ರಾರಂಭಿಸಲಿದ್ದಾರೆ. ಚರ್ಚೆಗೆ ಹತ್ತು ಗಂಟೆಗಳ ಸಮಯವನ್ನು ನಿಗದಿಪಡಿಸಲಾಗಿದೆ. ಬಂಕಿಮ್ ಚಂದ್ರ ಚಟರ್ಜಿ ಅವರು ಬರೆದ ಈ ಗೀತೆ ೧೮೭೫ರ ನವೆಂಬರ್ ೭ರಂದು ಬಂಗದರ್ಶನ್ ನಿಯತಕಾಲಿಕೆಯಲ್ಲಿ ಮೊದಲ ಬಾರಿಗೆ ಪ್ರಕಟವಾಗಿದ್ದು, ಈ ಗೀತೆ ಸ್ವಾತಂತ್ರ್ಯ ಹೋರಾಟಕ್ಕೆ ನೀಡಿದ ಪ್ರೇರಣೆ, ಅದರ ಐತಿಹಾಸಿಕ ಮಹತ್ವ ಮತ್ತು ಪ್ರಸ್ತುತತೆಯ ಬಗ್ಗೆ ಪ್ರಧಾನಮಂತ್ರಿ ವಿವರಿಸಲಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಮಧ್ಯಾಹ್ನ ೧೨ ಗಂಟೆಗೆ ಚರ್ಚೆ ಆರಂಭವಾಗಲಿದೆ. ಮಂಗಳವಾರದಂದು ಲೋಕಸಭೆಯಲ್ಲಿ ಚುನಾವಣಾ ಸುಧಾರಣೆಗಳ ಕುರಿತು ಚರ್ಚೆ ನಡೆಯಲಿದೆ ಎಂದರು. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರ ಅಧ್ಯಕ್ಷತೆಯಲ್ಲಿ ನಡೆದ ಸರ್ವಪಕ್ಷ ಸಭೆಯಲ್ಲಿ, ವಂದೇ ಮಾತರಂ ಕುರಿತು ಚರ್ಚೆಯನ್ನು ಇಂದು ಮತ್ತು ಚುನಾವಣಾ ಸುಧಾರಣೆಗಳ ಕುರಿತು ಚರ್ಚೆಯನ್ನು ನಾಳೆ ನಡೆಸಲು ನಿರ್ಧರಿಸಲಾಗಿದೆ ಎಂದು ಅವರು ತಿಳಿಸಿದ್ದರು.

<><><>

ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಗಾಗಿ ಅಂತರಸರ್ಕಾರಿ ಸಮಿತಿಯ ೨೦ನೇ ಅಧಿವೇಶನವು ಇಂದು ನವದೆಹಲಿಯ ಕೆಂಪು ಕೋಟೆಯಲ್ಲಿ ಪ್ರಾರಂಭವಾಗಲಿದೆ. ಈ ಅಧಿವೇಶನದ ಅಧ್ಯಕ್ಷತೆಯನ್ನು ಯುನೆಸ್ಕೋದ ಭಾರತದ ರಾಯಭಾರಿ ಮತ್ತು ಶಾಶ್ವತ ಪ್ರತಿನಿಧಿ ವಿಶಾಲ್ ವಿ. ಶರ್ಮಾ ವಹಿಸಲಿದ್ದಾರೆ. ಬೆಳಕು, ಸಹೋದರತ್ವ, ಕರುಣೆ ಮತ್ತು ಸಾಮೂಹಿಕ ಆಚರಣೆಯ ಹಬ್ಬವಾದ ದೀಪಾವಳಿಯನ್ನು ಭಾರತವು ಈ ವರ್ಷದ ಯುನೆಸ್ಕೋ ಪರಂಪರೆಯ ಪಟ್ಟಿಗೆ ಸಲ್ಲಿಸಲು ನಾಮನಿರ್ದೇಶನ ಮಾಡಿದೆ. ಸ್ವತಂತ್ರ ಮೌಲ್ಯಮಾಪನ ಸಂಸ್ಥೆಗಳು ಈ ಹಿಂದೆ ಪರಿಶೀಲಿಸಿದ ಪ್ರಸ್ತಾವನೆಯನ್ನು ಅಧಿವೇಶನದಲ್ಲಿ ಚರ್ಚಿಸಲಾಗುವುದು ಮತ್ತು ಸರ್ಕಾರವು ಸಕಾರಾತ್ಮಕ ಫಲಿತಾಂಶದ ವಿಶ್ವಾಸ ಹೊಂದಿದೆ ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ. ಆರು ದಿನಗಳ ಈ ಕಾರ್ಯಕ್ರಮವು, ಯುನೆಸ್ಕೋ ಐಸಿಎಚ್ ಪಟ್ಟಿಗಳಲ್ಲಿ ಸೇರಿಸಲು ರಾಜ್ಯ ಪಕ್ಷಗಳು ಸಲ್ಲಿಸಿದ ನಾಮನಿರ್ದೇಶನಗಳನ್ನು ಪರಿಶೀಲಿಸುವುದು, ಅಸ್ತಿತ್ವದಲ್ಲಿರುವ ಅಂಶಗಳ ಸ್ಥಿತಿಯನ್ನು ಪರಿಶೀಲಿಸುವುದು ಮತ್ತು ಸಾಂಸ್ಕೃತಿಕ ಪರಂಪರೆಯನ್ನು ರಕ್ಷಿಸಲು ಅಂತಾರಾಷ್ಟ್ರೀಯ ನೆರವು ನೀಡುವ ಗುರಿಯನ್ನು ಹೊಂದಿದೆ. ನಿನ್ನೆ ಈ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ನಡೆಯಿತು.

<><><>

'ಅಭಿವೃದ್ಧಿಯೂ ಪರಂಪರೆಯೂ' ಎಂಬ ಧ್ಯೇಯವಾಕ್ಯವು ಸಾಂಸ್ಕೃತಿಕ ಬೇರುಗಳನ್ನು ಅಳಿಸಿಹಾಕುವ ಬದಲು ಸಂಸ್ಕೃತಿಯನ್ನು ಬಲಪಡಿಸುವುದನ್ನು ಖಚಿತಪಡಿಸಿಕೊಳ್ಳುವ ಬದ್ಧತೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಯಾವುದೇ ಸಂಪ್ರದಾಯ, ಯಾವುದೇ ಸಾಧಕ ಮತ್ತು ಯಾವುದೇ ಸಮುದಾಯವು ತೆರೆಮರೆಯಲ್ಲಿ ಉಳಿಯದಂತೆ ಭಾರತ ಖಚಿತಪಡಿಸುತ್ತಿದೆ ಎಂದು ಅವರು ಹೇಳಿದರು. ನವದೆಹಲಿಯಲ್ಲಿ ಯುನೆಸ್ಕೋದ ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಗಾಗಿ ಅಂತರಸರ್ಕಾರಿ ಸಮಿತಿಯ ೨೦ನೇ ಅಧಿವೇಶನದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಭಾರತಕ್ಕೆ ಪರಂಪರೆ ಎಂದಿಗೂ ಹಳೆಯದನ್ನು ನೆನಪಿಸುವ ವಿಷಯವಾಗಿರದೆ ಜ್ಞಾನ, ಸೃಜನಶೀಲತೆ ಮತ್ತು ಸಮುದಾಯದ ನಿರಂತರ ಹರಿವಿನ ಜೀವಂತ ನದಿಯಾಗಿದೆ ಎಂದು ಹೇಳಿದರು. ಸಮಾರಂಭವನ್ನುದ್ದೇಶಿಸಿ ಮಾತನಾಡಿದ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ಭಾರತವು ಯುನೆಸ್ಕೋದ ಅನೇಕ ಪರಂಪರೆಯ ತಾಣಗಳ ನೆಲೆಯಾಗಿರುವುದಲ್ಲದೆ, ಪ್ರಪಂಚದಾದ್ಯಂತ ಪರಂಪರೆಗಳನ್ನು ಸಂರಕ್ಷಿಸಲು ಹಲವು ಯೋಜನೆಗಳನ್ನು ಕೈಗೊಂಡಿದೆ. ಸಂಪ್ರದಾಯಗಳು, ಭಾಷೆಗಳು ಮತ್ತು ಹಬ್ಬಗಳು ಸಂಸ್ಕೃತಿಯ ಅತ್ಯಂತ ಪ್ರಮುಖ ಅಂಶಗಳಾಗಿವೆ ಎಂದು ಹೇಳಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಈ ಸಭೆಯು ಜೀವಂತ ಸಂಪ್ರದಾಯಗಳನ್ನು ರಕ್ಷಿಸುವ ದೇಶದ ಬದ್ಧತೆಯನ್ನು ಬಲಪಡಿಸುತ್ತದೆ ಎಂದು ಹೇಳಿದರು.

<><><><>

ಕರ್ನಾಟಕದ ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ಇಂದಿನಿಂದ ಆರಂಭವಾಗಲಿದೆ. ಒಟ್ಟು ೧೦ ದಿನಗಳ ಅಧಿವೇಶನದಲ್ಲಿ ೨೧ಕ್ಕೂ ಹೆಚ್ಚು ವಿಧೇಯಕಗಳ ಮಂಡನೆಗೆ ಸರ್ಕಾರ ಸಿದ್ಧತೆ ನಡೆಸಿದೆ. ದ್ವೇಷ ಭಾಷಣ ತಡೆಗೆ ಹೊಸ ಕಾನೂನು, ಸಾಮಾಜಿಕ ಬಹಿಷ್ಕಾರ ಹೇರುವುದನ್ನು ಶಿಕ್ಷಾರ್ಹ ಅಪರಾಧವಾಗಿ ಪರಿಗಣಿಸುವ ಎರಡು ಪ್ರಮುಖ ವಿಧೇಯಕಗಳು ಅಧಿವೇಶನದಲ್ಲಿ ಚರ್ಚೆಗೆ ಬರಲಿವೆ. ನಾಯಕತ್ವ ಗೊಂದಲ, ಪಕ್ಷದೊಳಗಿನ ಭಿನ್ನಮತ, ಶಾಸಕರ ದೆಹಲಿ ಯಾತ್ರೆ ಸೇರಿದಂತೆ ಹಲವು ವಿಷಯಗಳನ್ನು ಪ್ರಸ್ತಾಪಿಸಿ ಸರ್ಕಾರವನ್ನು ಮುಜುಗರಕ್ಕೆ ಸಿಲುಕಿಸಲು ಪ್ರತಿಪಕ್ಷಗಳು ಸಜ್ಜಾಗಿವೆ. ಬೆಳಗಾವಿ ಅಧಿವೇಶನಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ಸುವರ್ಣಸೌಧದಲ್ಲಿ ಮುಖ್ಯಮಂತ್ರಿ, ಸಚಿವರು, ವಿವಿಧ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳ ಕಚೇರಿಗಳ ಸ್ವಚ್ಛತೆ, ಪೀಠೋಪಕರಣ ಅಳವಡಿಕೆ, ಕುಡಿಯುವ ನೀರು, ಊಟದ ವ್ಯವಸ್ಥೆ, ಸಾರಿಗೆ ವ್ಯವಸ್ಥೆ, ಶೌಚಾಲಯ, ದೀಪದ ವ್ಯವಸ್ಥೆ, ಸೇರಿದಂತೆ ತಾಂತ್ರಿಕ ವ್ಯವಸ್ಥೆಗೆ ಕ್ರಮವಹಿಸಿದೆ. ಭದ್ರತಾ ದೃಷ್ಟಿಯಿಂದ ಸುವರ್ಣಸೌಧದ ಒಳಗೂ ಮತ್ತು ಹೊರಗೂ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ಸುಮಾರು ೮ ಸಾವಿರ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ೨೦ ದಿನಗಳ ಕಾಲ ಸುವರ್ಣ ಸೌಧದ ಸುತ್ತ ಮೂರು ಕಿಲೋ ಮೀಟರ್ ಅಂತರದ ವರೆಗೆ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಅನುಮತಿ ಪಡೆದವರಿಗೆ ಮಾತ್ರ ಅಧಿವೇಶನದ ಸಂದರ್ಭದಲ್ಲಿ ಪ್ರತಿಭಟನೆಗೆ ಅವಕಾಶ ಕಲ್ಪಿಸಲಾಗಿದೆ. ಅಧಿವೇಶನ ಸಂದರ್ಭದಲ್ಲಿ ಸಭಾಧ್ಯಕ್ಷರ ಸೂಚನೆ ಮೇರೆಗೆ ಈ ಬಾರಿ ೪೮, ೭೨ ಉದ್ದಳತೆಯ ಬೃಹತ್ ಗಾತ್ರದ ರಾಷ್ಟ್ರ ಧ್ವಜದ ಪ್ರದರ್ಶನ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.

<><><><>

ದೆಹಲಿ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ ಮತ್ತು ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ನಿನ್ನೆ ಸಶಸ್ತ್ರ ಪಡೆಗಳ ಧ್ವಜ ದಿನದ ಸಂದರ್ಭದಲ್ಲಿ ರಕ್ಷಣಾ ಪಡೆಗಳ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ವಾಯುಪಡೆಯ ಮುಖ್ಯಸ್ಥ ಏರ್‌ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್

ಮತ್ತು ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ ಅವರನ್ನು ಸನ್ಮಾನಿಸಿದರು. ದೇಶದ ಜನರು ಸುರಕ್ಷಿತ ಮತ್ತು ಮುಕ್ತ ಜೀವನವನ್ನು ನಡೆಸಲು ಅನುವು ಮಾಡಿಕೊಡುವ ಅಸಂಖ್ಯಾತ ತ್ಯಾಗಗಳನ್ನು ನೆನಪಿಸುವ ದಿನವಿದು. ಧೈರ್ಯಶಾಲಿ ಸೈನಿಕರು, ಹುತಾತ್ಮರ ಕುಟುಂಬಗಳು ಮತ್ತು ರಾಷ್ಟ್ರದ ಭದ್ರತೆಗೆ ಸಮರ್ಪಿತರಾದ ಮಾಜಿ ಸೈನಿಕರಿಗೆ ಕೃತಜ್ಞತೆ ಸಲ್ಲಿಸುವುದು ಪ್ರತಿಯೊಬ್ಬ ಭಾರತೀಯನಿಗೂ ಹೆಮ್ಮೆಯ ವಿಷಯ ಎಂದು ಮುಖ್ಯಮಂತ್ರಿ ರೇಖಾ ಗುಪ್ತಾ ಹೇಳಿದರು. ಈ ವೇಳೆ ಶೌರ್ಯ ಮತ್ತು ವಿಶಿಷ್ಟ ಸೇವಾ ಪದಕಗಳನ್ನು ಪಡೆದ ಸಶಸ್ತ್ರ ಪಡೆಗಳ ಸಿಬ್ಬಂದಿಯನ್ನು ಅವರು ಸನ್ಮಾನಿಸಿದರು ಹಾಗು ಸಶಸ್ತ್ರ ಪಡೆಗಳ ಕಲ್ಯಾಣಕ್ಕೆ ಅತ್ಯುತ್ತಮ ಕೊಡುಗೆ ನೀಡಿದ ಹತ್ತು ವಿಶಿಷ್ಟ ನಾಗರಿಕರನ್ನು ಸನ್ಮಾನಿಸಲಾಯಿತು.

<><><><>

ಮಾನವ ಹಕ್ಕುಗಳ ದಿನದ ಅಂಗವಾಗಿ ಇದೇ ೧೦ ರಂದು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ - ಎನ್‌ಎಚ್‌ಆರ್‌ಸಿ ಏರ್ಪಡಿಸಿರುವ 'ಎಲ್ಲರಿಗೂ ಘನತೆ' ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ ಮಾಡಲಿದ್ದಾರೆ. ಎಲ್ಲರಿಗೂ ಮೂಲಭೂತ ಸೌಕರ್ಯ, ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಘನತೆ ಖಾತರಿಪಡಿಸುವಲ್ಲಿ ಸ್ಪಂದಿಸುವ ಆಡಳಿತ ಮತ್ತು ದಕ್ಷ ಸಾರ್ವಜನಿಕ ಸೇವಾ ವಿತರಣೆಯು ಪ್ರಮುಖ ಪಾತ್ರ ವಹಿಸುತ್ತದೆ ಎಂಬ ಬಗ್ಗೆ ರಾಷ್ಟ್ರಪತಿಯವರು ವಿವರಿಸುವ ನಿರೀಕ್ಷೆಯಿದೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ. 'ದೈನಂದಿನ ಅಗತ್ಯತೆಗಳು' ಎಂಬುದು ಈ ವರ್ಷದ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ದಿನದ ವಿಷಯಕ್ಕೆ ಅನುಗುಣವಾಗಿ ಎನ್‌ಎಚ್‌ಆಆರ್‌ಸಿ 'ದೈನಂದಿನ ಅಗತ್ಯಗಳ ಖಾತರಿ: ಸಾರ್ವಜನಿಕ ಸೇವೆಗಳು ಮತ್ತು ಎಲ್ಲರಿಗೂ ಘನತೆ' ಕುರಿತು ರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಿದೆ. ಮೂಲಭೂತ ಸೌಕರ್ಯಗಳಿಗೆ ಏಕರೂಪದ ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ಮತ್ತು ಎಲ್ಲರಿಗೂ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಮತ್ತು ಘನತೆಯ ಸಾಂವಿಧಾನಿಕ ಭರವಸೆಯನ್ನು ಪೂರೈಸಲು ಸ್ಪಂದಿಸುವ ಆಡಳಿತ ಮತ್ತು ದಕ್ಷ ಸಾರ್ವಜನಿಕ ಸೇವೆ ಒದಗಿಸುವುದು ಆಯೋಗದ ಉದ್ದೇಶವಾಗಿದೆ. ೧೯೪೮ ರಲ್ಲಿ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಮಾನವ ಹಕ್ಕುಗಳ ಸಾರ್ವತ್ರಿಕ ಘೋಷಣೆ ಅಂಗೀಕಾರದ ಸ್ಮರಣಾರ್ಥ ೧೯೫೦ ರಿಂದ ಪ್ರತಿವರ್ಷ ಡಿಸೆಂಬರ್ ೧೦ ರಂದು ಮಾನವ ಹಕ್ಕುಗಳ ದಿನ ಆಚರಿಸಲಾಗುತ್ತದೆ.

<><><><>

ಗೋವಾದ ಕ್ಲಬ್‌ನಲ್ಲಿ ಸಂಭವಿಸಿದ ಭಾರಿ ಬೆಂಕಿ ಅವಘಡದಲ್ಲಿ ೨೫ ಜನರು ಮೃತಪಟ್ಟ ಮತ್ತು ಇತರ ಆರು ಜನರು ಗಾಯಗೊಂಡ ನಂತರ ಗೋವಾ ಪೊಲೀಸರು ಜನರಲ್ ಮ್ಯಾನೇಜರ್ ಮತ್ತು ಅರ್ಪೋರಾ ನೈಟ್‌ಕ್ಲಬ್‌ನ ೩ ಸಿಬ್ಬಂದಿ ಸೇರಿದಂತೆ ನಾಲ್ವರನ್ನು ಬಂಧಿಸಿದ್ದಾರೆ. ಪೊಲೀಸರು ನೈಟ್‌ಕ್ಲಬ್‌ನ ಮಾಲೀಕರು, ವ್ಯವಸ್ಥಾಪಕರು ಮತ್ತು ಕಾರ್ಯಕ್ರಮ ಆಯೋಜಕರ ವಿರುದ್ಧ ಎಫ್‌ಐಆರ್ ದಾಖಲಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

<><><><>

ಕೇಪ್‌ಟೌನ್‌ನ ಸ್ಟೆಲೆನ್‌ಬೋಶ್‌ನಲ್ಲಿ ನಿನ್ನೆ ರಾತ್ರಿ ನಡೆದ ಪುರುಷರ ಹಾಕಿಯ, ಮೂರು ಪಂದ್ಯಗಳ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ತಂಡವು, ಆತಿಥೇಯ ದಕ್ಷಿಣ ಆಫ್ರಿಕಾವನ್ನು ೫-೨ ಅಂತರದಿಂದ ಸೋಲಿಸಿತು. ಭಾರತದ ಪರವಾಗಿ, ಶೈಲಾನಂದ್ ಲಾಕ್ರಾ, ಆದಿತ್ಯ ಲಾಲೇಜ್, ಅಮಿತ್ ರೋಹಿದಾಸ್, ಹರ್ಮನ್‌ಪ್ರೀತ್ ಸಿಂಗ್ ಮತ್ತು ದಿಲ್‌ಪ್ರೀತ್ ಸಿಂಗ್ ಗೋಲುಗಳನ್ನು ಗಳಿಸಿದರೆ, ದಕ್ಷಿಣ ಆಫ್ರಿಕಾ ಪರ ಮುಸ್ತಫಾ ಕ್ಯಾಸಿಮ್ ಮತ್ತು ವಿವೆ ಎಂಬಾಟಾ ಗೋಲು ಗಳಿಸಿದರು. ಎರಡನೇ ಹಾಕಿ ಪಂದ್ಯ ಇಂದು ಭಾರತೀಯ ಕಾಲಮಾನ ರಾತ್ರಿ ೮:೩೦ ಕ್ಕೆ ಕೇಪ್‌ಟೌನ್‌ನ ಹಾರ್ಟ್ಲೆವೇಲ್ ಕ್ರೀಡಾಂಗಣದಲ್ಲಿ ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>